**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/650/ಗ್ರಾಪಂಕಾ/2014

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:19-09-2014.

**ಸುತ್ತೋಲೆ**

**ವಿಷಯ:** **ಗ್ರಾಮ ಪಂಚಾಯತಿಯ ಆಸ್ತಿಯನ್ನು ರಕ್ಷಿಸುವ ಸಲುವಾಗಿ ಪ್ರತಿ ಗ್ರಾಮ ಪಂಚಾಯತಿ ತನ್ನ ಆಸ್ತಿ ರಿಜಿಸ್ಟರ್‌ನ್ನು ನಿರ್ವಹಿಸಿ ಅದನ್ನು ಸಾರ್ವಜನಿಕ ಪರಿಶೀಲನೆಗೆ ಒದಗಿಸುವ ಬಗ್ಗೆ ಮತ್ತು ಗ್ರಾಮ ಪಂಚಾಯಿತಿಗಳಲ್ಲಿ ನಿರ್ವಹಣೆ ಮಾಡಬೇಕಾದ ದಾಖಲೆಗಳನ್ನು ನಿರ್ವಹಣೆ ಮಾಡುವ ಬಗ್ಗೆ.**

**ಉಲ್ಲೇಖ:** ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 346 ಗ್ರಾಪಂಅ 2014, ದಿನಾಂಕ:17.08.2013.

-------

1. ಕರ್ನಾಟಕ ವಿಧಾನ ಸಭೆಯ 2013-14ನೇ ಸಾಲಿನ ಅಂದಾಜುಗಳ ಸಮಿತಿಯು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಸಂಬಂಧಿಸಿದ ಸಮಿತಿಯ 3ನೇ ವರದಿಯನ್ನು ದಿನಾಂಕ: 22-07-2014ರಂದು ವಿಧಾನ ಸಭೆಯಲ್ಲಿ ಮಂಡಿಸಿರುತ್ತಾರೆ. ಸದರಿ ವರದಿಯಲ್ಲಿ ರಾಜ್ಯದಲ್ಲಿ 5629 ಗ್ರಾಮ ಪಂಚಾಯಿತಿಗಳಿದ್ದು, ಅವುಗಳ ಆಸ್ತಿಗಳ ಬಗ್ಗೆ ಸಮಿತಿ ಚರ್ಚಿಸಿದ್ದು, 1) ರಾಜ್ಯಾದ್ಯಂತ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇರುವ ಸರ್ಕಾರಿ ಆಸ್ತಿಯನ್ನು ಸರ್ವೆ ಮಾಡಿ ದಾಖಲು ಮಾಡಲು, 2) ಕೃಷಿ ಭೂಮಿಯನ್ನು ಕೃಷಿಯೇತರ ಬಳಕೆಗಾಗಿ ಪರಿವರ್ತನೆ ಮಾಡಿಕೊಂಡು ನಿವೇಶನಗಳನ್ನು ಮಾಡಿರುವ ಬಡಾವಣೆಗಳ ವಿವರಗಳನ್ನು ಸಂಗ್ರಹಿಸಿ ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ದಾಖಲೆಯನ್ನು ನಿರ್ವಹಿಸಲು ವಿಶೇಷ ಅಭಿಯಾನ ಕೈಗೊಳ್ಳತಕ್ಕದ್ದು. 3) ಕೃಷಿ ಭೂಮಿಯನ್ನು ಕೃಷಿಯೇತರ ಬಳಕೆಗಾಗಿ ಪರಿವರ್ತನೆ ಮಾಡಿಕೊಂಡು ನಿವೇಶನಗಳನ್ನು ಮಾಡಿರುವ ಬಡಾವಣೆಗಳಲ್ಲಿನ ರಸ್ತೆ, ಉದ್ಯಾವನ, ನಾಗರೀಕ ಸೌಲಭ್ಯಗಳಿಗೆ ಮೀಸಲಾದ ನಿವೇಶನ/ಜಾಗವನ್ನು ಗ್ರಾಮ ಪಂಚಾಯಿತಿಗಳ ಹೆಸರಿಗೆ ಉಚಿತವಾಗಿ ನೋಂದಣಿ ಮಾಡಿಕೊಳ್ಳಲು ಕ್ರಮ ವಹಿಸಬೇಕು. ಈ ಬಗ್ಗೆ ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಾರ್ಯನಿರ್ವಾಹಕ ಅಧಿಕಾರಿ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಜವಾಬ್ದಾರಿ/ಹೊಣೆಗಾರಿಕೆಯನ್ನು ನಿಗದಿಪಡಿಸಬೇಕು. 4) ಕೃಷಿ ಭೂಮಿಯನ್ನು ಕೃಷಿಯೇತರ ಬಳಕೆಗಾಗಿ ಪರಿವರ್ತನೆ ಮಾಡಿಕೊಂಡು ನಿವೇಶನಗಳನ್ನು ಮಾಡಿರುವ ಬಡಾವಣೆಗಳಲ್ಲಿನ ರಸ್ತೆ, ಉದ್ಯಾವನ, ನಾಗರೀಕ ಸೌಲಭ್ಯಗಳಿಗೆ ಮೀಸಲಾದ ನಿವೇಶನ/ಜಾಗವನ್ನು ಬೇರೆಯವರಿಗೆ ಮಾರಾಟ ಮಾಡಿರುವ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸುವುದು 5) ರಾಜ್ಯದ ಬಹಳಷ್ಟು ಗ್ರಾಮ ಪಂಚಾಯಿತಿ ಪ್ರದೇಶಗಳು ಅಭಿವೃದ್ಧಿಯನ್ನು ಹೊಂದಿ ನಗರ ಪ್ರದೇಶಗಳಾಗಿ ಮಾರ್ಪಾಡಾಗುತ್ತಿವೆ. ಈ ಪ್ರದೇಶಗಳಲ್ಲಿ ನಿವೇಶನಗಳಿಗೆ ಬೇಡಿಕೆ ಹೆಚ್ಚಾಗುತ್ತಿದೆ. ಆದುದರಿಂದ ಅಭಿವೃದ್ಧಿ ಹೊಂದಿ ನಗರ ಪ್ರದೇಶಗಳಾಗಿ ಪರಿವರ್ತನೆಯಾಗುತ್ತಿರುವ ಗ್ರಾಮ ಪಂಚಾಯಿತಿ ಪ್ರದೇಶಗಳನ್ನು ಪುರಸಭೆ/ನಗರಸಭೆ ವ್ಯಾಪ್ತಿಗೆ ಒಳಪಡಿಸಲು ಮತ್ತು 6) ಗ್ರಾಮ ಪಂಚಾಯಿತಿಗಳಲ್ಲಿ ನಿರ್ವಹಣೆ ಮಾಡಬೇಕಾದ ದಾಖಲೆಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಣೆ ಮಾಡದೆ ಹಲವಾರು ಸಮಸ್ಯೆಗಳಿಗೆ ಕಾರಣವಾಗಿರುವ ಹಿನ್ನೆಲೆಯಲ್ಲಿ ಎಲ್ಲಾ ದಾಖಲೆಗಳನ್ನು ಸೂಕ್ತ

ರೀತಿಯಲ್ಲಿ ನಿರ್ವಹಣೆ ಮಾಡುವಂತಹ ವ್ಯವಸ್ಥೆಯನ್ನು ಜಾರಿಗೆ ತರುವಂತೆ ಸಮಿತಿಯು ಶಿಫಾರಸ್ಸು ಮಾಡಿರುತ್ತದೆ.

2. ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 209 ರಲ್ಲಿ ಗ್ರಾಮ ಪಂಚಾಯತಿಯು ಅದು ಅಧಿಕಾರ ಹೊಂದಿರುವಂತಹ ಪ್ರದೇಶದ ಪರಿಮಿತಿಯೊಳಗೆ ಆಗಲಿ ಅಥವಾ ಅದರ ಹೊರಗೆ ಆಗಲಿ ಇರುವ ಚರ ಮತ್ತು ಸ್ಥಿರ ಸ್ವತ್ತನ್ನು ಸಂರಕ್ಷಿಸುವ ಅವಕಾಶವಿದೆ. ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಗಳ ಆಯ-ವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರ ನಿಯಮ 69 ರಂತೆ ಗ್ರಾಮ ಪಂಚಾಯತಿಗಳು ಆಸ್ತಿ ರಿಜಿಸ್ಟರ್‌ಗಳನ್ನು ನಿರ್ವಹಿಸಬೇಕಾಗುತ್ತದೆ.

3. **ಅದರಂತೆ ಆಸ್ತಿ ರಿಜಿಸ್ಟರ್‌ಗಳನ್ನು ಗ್ರಾಮ ಪಂಚಾಯತಿಗಳು ನಿರ್ವಹಿಸಿರುವ ಬಗ್ಗೆ ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಈ ಕೆಳಗಿನಂತೆ ಕ್ರಮ ವಹಿಸುವಂತೆ ನಿರ್ದೇಶನ ನೀಡಿದೆ.**

ಎ) ಗ್ರಾಮ ಪಂಚಾಯತಿಗಳು ಆಸ್ತಿ ರಿಜಿಸ್ಟರ್‌ಗಳನ್ನು ನಿಯಮ 69 ರಂತೆ ನಿರ್ವಹಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳತಕ್ಕದ್ದು.

ಬಿ) ಗ್ರಾಮ ಪಂಚಾಯತಿಗಳು ಆಸ್ತಿ ರಿಜಿಸ್ಟರ್‌ಗಳನ್ನು ನಿರ್ವಹಿಸಿ ಕಾಲೋಚಿತಗೊಳಿಸಿರುವ ಬಗ್ಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಶೇಕಡಾ 5 ರಷ್ಟು, ಉಪಕಾರ್ಯದರ್ಶಿ (ಅಭಿವೃದ್ಧಿ) ಶೇ 15 ರಷ್ಟು, ಮುಖ್ಯ ಲೆಕ್ಕಾಧಿಕಾರಿ ಶೇ 15 ರಷ್ಟು, ಯೋಜನಾಧಿಕಾರಿ ಶೇ 15 ರಷ್ಟು ಮತ್ತು ಸಂಬಂಧಿಸಿದ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯು ಶೇ 50 ರಷ್ಟು ತಪಾಸಣೆ ವೇಳಾ ಪಟ್ಟಿಯನ್ನು ಹಾಕಿಕೊಂಡು ತಪಾಸಣೆ ಮಾಡತಕ್ಕದ್ದು.

ಸಿ) ಗ್ರಾಮ ಪಂಚಾಯತಿಯ ಆಸ್ತಿಯ ವಿವರಗಳನ್ನು ಪಂಚತಂತ್ರ ತಂತ್ರಾಂಶದಲ್ಲಿ ಸಹ ದಾಖಲಿಸಿರುವ ಬಗ್ಗೆ ಪರಿಶೀಲನೆ ಮಾಡತಕ್ಕದ್ದು.

ಡಿ) ಗ್ರಾಮ ಪಂಚಾಯತಿಯು ಆಸ್ತಿಗಳ ವಿವರಗಳನ್ನು ಸಾರ್ವಜನಿಕರ ಮಾಹಿತಿಗಾಗಿ ಓದಿ ಮಂಡಿಸತಕ್ಕದ್ದು.

ಇ) ಗ್ರಾಮ ಪಂಚಾಯತಿ ಆಸ್ತಿ ರಕ್ಷಣೆಗೆ ಕೈಗೊಂಡ ಕ್ರಮಗಳನ್ನು ಪರೀಕ್ಷಿಸುವುದು.

ಎಫ್) ಪ್ರತಿಯೊಂದು ಗ್ರಾಮ ಪಂಚಾಯತಿಯು ತನ್ನ ಕಛೇರಿಯ ಗೋಡೆಯ ಮೇಲೆ ತನ್ನ ಆಸ್ತಿಯ ವಿವರಗಳನ್ನು 45 ದಿನಗಳೊಳಗಾಗಿ ಕಡ್ಡಾಯವಾಗಿ ಬರೆಸತಕ್ಕದ್ದು.

ಜಿ) ಆಸ್ತಿ ರಿಜಿಸ್ಟರ್‌ನ ನಮೂನೆಗಳ ಪ್ರತಿಯನ್ನು ಗ್ರಾಮ ಪಂಚಾಯತಿಯು ಸಾರ್ವಜನಿಕರ ಪರಿಶೀಲನೆಗೆ ಒದಗಿಸತಕ್ಕದ್ದು.

ಹೆಚ್)ಆಸ್ತಿ ವಿವರಗಳನ್ನು ಪಂಚತಂತ್ರ ತಂತ್ರಾಂಶದಲ್ಲಿ ಅಂದರೆ http://stg2.kar.nic.in/gpportal (Panchamitra Portal) ಅಳವಡಿಸಿ ಇದನ್ನು ವೆಬ್‌ಸೈಟ್‌ನಲ್ಲಿ ನೋಡಲು ಸಾರ್ವಜನಿಕರಿಗೆ ತಿಳಿಸಲು ಗ್ರಾಮ ಪಂಚಾಯಿತಿ ಕಛೇರಿಯಲ್ಲಿ ವೆಬ್‌ಸೈಟ್ ವಿಳಾಸವನ್ನು ನಮೂದಿಸಬಹುದು.

ಐ) ರಾಜ್ಯಾದ್ಯಂತ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಇರುವ ಸರ್ಕಾರಿ ಆಸ್ತಿಯನ್ನು ಸರ್ವೆ ಮಾಡಿ ದಾಖಲು ಮಾಡತಕ್ಕದ್ದು.

ಜೆ) ಕೃಷಿ ಭೂಮಿಯನ್ನು ಕೃಷಿಯೇತರ ಬಳಕೆಗಾಗಿ ಪರಿವರ್ತನೆ ಮಾಡಿಕೊಂಡು ನಿವೇಶನಗಳನ್ನು ಮಾಡಿರುವ ಬಡಾವಣೆಗಳ ವಿವರಗಳನ್ನು ಸಂಗ್ರಹಿಸಿ ಪ್ರತಿ ಗ್ರಾಮ

ಪಂಚಾಯಿತಿಯಲ್ಲಿ ದಾಖಲೆಯನ್ನು ನಿರ್ವಹಿಸಲು ವಿಶೇಷ ಅಭಿಯಾನ ಕೈಗೊಳ್ಳತಕ್ಕದ್ದು.

ಕೆ) ಕೃಷಿ ಭೂಮಿಯನ್ನು ಕೃಷಿಯೇತರ ಬಳಕೆಗಾಗಿ ಪರಿವರ್ತನೆ ಮಾಡಿಕೊಂಡು ನಿವೇಶನಗಳನ್ನು ಮಾಡಿರುವ ಬಡಾವಣೆಗಳಲ್ಲಿನ ರಸ್ತೆ, ಉದ್ಯಾವನ, ನಾಗರೀಕ ಸೌಲಭ್ಯಗಳಿಗೆ ಮೀಸಲಾದ ನಿವೇಶನ/ಜಾಗವನ್ನು ಗ್ರಾಮ ಪಂಚಾಯಿತಿಗಳ ಹೆಸರಿಗೆ ಉಚಿತವಾಗಿ ನೋಂದಣಿ ಮಾಡಿಕೊಳ್ಳಲು ಕ್ರಮ ವಹಿಸಬೇಕು. ಈ ಬಗ್ಗೆ ಸಂಬಂಧಪಟ್ಟ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಜವಾಬ್ದಾರಿ/ಹೊಣೆಗಾರಿಕೆಯನ್ನು ನಿಗದಿಪಡಿಸತಕ್ಕದ್ದು.

ಎಲ್) ಕೃಷಿ ಭೂಮಿಯನ್ನು ಕೃಷಿಯೇತರ ಬಳಕೆಗಾಗಿ ಪರಿವರ್ತನೆ ಮಾಡಿಕೊಂಡು ನಿವೇಶನಗಳನ್ನು ಮಾಡಿರುವ ಬಡಾವಣೆಗಳಲ್ಲಿನ ರಸ್ತೆ, ಉದ್ಯಾವನ, ನಾಗರೀಕ ಸೌಲಭ್ಯಗಳಿಗೆ ಮೀಸಲಾದ ನಿವೇಶನ/ಜಾಗವನ್ನು ಬೇರೆಯವರಿಗೆ ಮಾರಾಟ ಮಾಡಿರುವ ಬಗ್ಗೆ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸತಕ್ಕದ್ದು, ಮತ್ತು

ಎಂ) ರಾಜ್ಯದ ಬಹಳಷ್ಟು ಗ್ರಾಮ ಪಂಚಾಯಿತಿ ಪ್ರದೇಶಗಳು ಅಭಿವೃದ್ಧಿಯನ್ನು ಹೊಂದಿ ನಗರ ಪ್ರದೇಶಗಳಾಗಿ ಮಾರ್ಪಾಡಾಗುತ್ತಿವೆ. ಈ ಪ್ರದೇಶಗಳಲ್ಲಿ ನಿವೇಶನಗಳಿಗೆ ಬೇಡಿಕೆ ಹೆಚ್ಚಾಗುತ್ತಿದೆ. ಆದುದರಿಂದ ಅಭಿವೃದ್ಧಿ ಹೊಂದಿ ನಗರ ಪ್ರದೇಶಗಳಾಗಿ ಪರಿವರ್ತನೆಯಾಗುತ್ತಿರುವ ಗ್ರಾಮ ಪಂಚಾಯಿತಿ ಪ್ರದೇಶಗಳನ್ನು ಪುರಸಭೆ/ನಗರಸಭೆ ವ್ಯಾಪ್ತಿಗೆ ಒಳಪಡಿಸಲು ಜಿಲ್ಲಾಧಿಕಾರಿಗಳಿಗೆ ಪ್ರಸ್ತಾವನೆ ಸಲ್ಲಿಸಲು ಕ್ರಮ ವಹಿಸತಕ್ಕದ್ದು.

ಎನ್) ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಗಳ ಆಯವ್ಯಯ ಮತ್ತು ಲೆಕ್ಕಪತ್ರಗಳು) ನಿಯಮಗಳು, 2006 ರನ್ವಯ ಗ್ರಾಮ ಪಂಚಾಯಿತಿಗಳಲ್ಲಿ ನಿರ್ವಹಣೆ ಮಾಡಬೇಕಾದ ದಾಖಲೆಗಳನ್ನು ಸೂಕ್ತ ರೀತಿಯಲ್ಲಿ ನಿರ್ವಹಣೆ ಮಾಡುವಂತಹ ವ್ಯವಸ್ಥೆಯನ್ನು ಜಾರಿಗೆ ತರಲು ಕ್ರಮವಹಿಸತಕ್ಕದ್ದು.

**(ಗಂಗಾರಾಮ್ ಬಡೇರಿಯಾ)**
ಸರ್ಕಾರದ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1) ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಎಲ್ಲಾ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು
4) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
5) ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.